ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದೇವನಹಳ್ಳಿ ನಗರದಲ್ಲಿ ನಿರ್ಮಾಣವಾಗುತ್ತಿರುವ ಡಾ॥ ಬಿ.ಆರ್. ಅಂಬೇಡ್ಕರ್ ಭವನಕ್ಕೆ ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದಿಂದ ಹೆಚ್ಚುವರಿ ಅನುದಾನ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ:-

1) ಸರ್ಕಾರದ ಆದೇಶ ಸಂಖ್ಯೆ:ನಅಇ 200 ಬಿಎಂಆರ್ 2009, ದಿನಾಂಕ:05-04-2012.
2) ಸದಸ್ಯ ಕಾರ್ಯದರ್ಶಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ಇವರ ಪತ್ರ ಸಂಖ್ಯೆ:ಬಿಐಎಎಪಿಎ/ಟಿಪಿ/ಆ.ಅ/02/2014-15, ದಿನಾಂಕ:16-09-2014.
3) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ: ಬಿಎಂಆರ್‌ಡಿಎ/ಬಿಐಎಎಪಿಎ/ಹೆಚ್ಚುವರಿ ಅನುದಾನ/04/14-15, ದಿನಾಂಕ:27-12-2014.

ಪ್ರಸ್ತಾವನೆ:-

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದಿಂದ ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಉತ್ತರ (ಅಪರ) ತಾಲ್ಲೂಕಿನ ಹೆಸರುಘಟ್ಟ ಹೋಬಳಿ, ಜಾಲ ಹೋಬಳಿ ಮತ್ತು ದೊಡ್ಡಬಳ್ಳಾಪುರ ತಾಲ್ಲೂಕು ವ್ಯಾಪ್ತಿಯಲ್ಲಿ ಒಟ್ಟು ರೂ. 43,75,00,000-00 ಮೊತ್ತದ ಕಾಮಗಾರಿಗಳನ್ನು ಕೈಗೊಳ್ಳಲು ಸರ್ಕಾರದ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದ್ದು, ಆ ಪೈಕಿ ಅಂಬೇಡ್ಕರ್ ಸಭಾಭವನ ನಿರ್ಮಾಣ ಕಾಮಗಾರಿಗೆ ರೂ.200.00 ಲಕ್ಷ ಮೊತ್ತಕ್ಕೆ ಮಂಜೂರಾತಿ ನೀಡಲಾಗಿರುತ್ತದೆ.

ಸದಸ್ಯ ಕಾರ್ಯದರ್ಶಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ಇವರು ಮೇಲೆ (2) ರಲ್ಲಿ ಓದಲಾದ ಪತ್ರದಲ್ಲಿ ದಿನಾಂಕ:03.09.2014 ರಂದು ನಡೆದ ಪ್ರಾಧಿಕಾರದ 101ನೇ ಸಭೆಯ ವಿಷಯ ಸಂಖ್ಯೆ:101(11)ರಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಪಟ್ಟಣದಲ್ಲಿ ನಿರ್ಮಿಸಲಾಗುತ್ತಿರುವ ಡಾ॥ ಅಂಬೇಡ್ಕರ್ ಭವನದ ಒಟ್ಟು ಅಂದಾಜು ಮೊತ್ತ ರೂ.700.00 ಲಕ್ಷಗಳಾಗಿದ್ದು, ಈಗಾಗಲೇ ಸರ್ಕಾರದ ಆದೇಶ ಸಂಖ್ಯೆ: ನಅಇ 200 ಬಿಎಂಆರ್ 2009 ದಿನಾಂಕ:05-04-2012 ರಲ್ಲಿ ಡಾ॥ ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣ ಕಾಮಗಾರಿಗೆ ಪ್ರಾಧಿಕಾರದ ವತಿಯಿಂದ 2.00 ಕೋಟಿ ರೂ.ಗಳ ಬಿಡುಗಡೆ ಆದೇಶ ಹೊರಡಿಸಲಾಗಿರುವುದರಿಂದ ಸದರಿ ಕಾಮಗಾರಿಯ ಮುಂದುವರಿಕೆಗೆ ಪ್ರಾಧಿಕಾರದ ವತಿಯಿಂದ ರೂ.1.00 ಕೋಟಿಗಳನ್ನು ಮಾತ್ರ ನೀಡಬಹುದು ಎಂದು ನಿರ್ಣಯ ಕೈಗೊಳ್ಳಲಾಗಿದ್ದು, ಅದರಂತೆ ರೂ.1.00 ಕೋಟಿಗಳನ್ನು ಬಿಡುಗಡೆ ಮಾಡಲು ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ (3)ರಲ್ಲಿ ಓದಲಾದ ದಿನಾಂಕ:27-12-2014ರ ಪತ್ರದಲ್ಲಿ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ಪ್ರಾಧಿಕಾರದ ಸಭೆಯ ನಿರ್ಣಯದಂತೆ ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದಿಂದ ದೇವನಹಳ್ಳಿ ನಗರದಲ್ಲಿ ನಿರ್ಮಾಣವಾಗುತ್ತಿರುವ ಡಾ॥ ಬಿ.ಆರ್. ಅಂಬೇಡ್ಕರ್ ಭವನಕ್ಕೆ ಹೆಚ್ಚುವರಿಯಾಗಿ ರೂ.1.00 ಕೋಟಿ ಅನುದಾನ ಬಿಡುಗಡೆ ಮಾಡುವ ಸಂಬಂಧ ಪ್ರಸ್ತಾವನೆಯನ್ನು ಸರ್ಕಾರದ ಆಡಳಿತಾತ್ಮಕ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 46 ಬಿಎಂಆರ್ 2014, ಬೆಂಗಳೂರು ದಿನಾಂಕ:23-03-2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಡಾ॥ ಬಿ.ಆರ್. ಅಂಬೇಡ್ಕರ್ ಭವನದ ಒಟ್ಟು ರೂ.700.00 ಲಕ್ಷಗಳ ಕಾಮಗಾರಿಗೆ ಸಕ್ಷಮ ಪ್ರಾಧಿಕಾರದಿಂದ ಆಡಳಿತಾತ್ಮಕ ಅನುಮೋದನೆ ಪಡೆಯುವ ಷರತ್ತಿಗೊಳಪಡಿಸಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ದಿನಾಂಕ:03-09-2014 ರ 101ನೇ ಸಭೆಯ ವಿಷಯ ಸಂಖ್ಯೆ:101(11)ರಲ್ಲಿ ನಿರ್ಣಯಿಸಿರುವಂತೆ ದೇವನಹಳ್ಳಿ ನಗರದಲ್ಲಿ ನಿರ್ಮಾಣವಾಗುತ್ತಿರುವ ಡಾ॥ ಬಿ.ಆರ್. ಅಂಬೇಡ್ಕರ್ ಭವನ ಕಾಮಗಾರಿಗೆ ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ವತಿಯಿಂದ ಹೆಚ್ಚುವರಿಯಾಗಿ ರೂ. 100.00 ಲಕ್ಷ ಮೊತ್ತವನ್ನು ಬಿಡುಗಡೆಗೊಳಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್. ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

ಇವರಿಗೆ:-

1) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಎಲ್.ಆರ್.ಡಿ.ಇ.ಬಿಲ್ಡಿಂಗ್, ಆಲಿಆಸ್ಕರ್ ರಸ್ತೆ, ಬೆಂಗಳೂರು-560 052.
2) ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.
3) ಸದಸ್ಯ ಕಾರ್ಯದರ್ಶಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ.
5) ಶಾಖಾ ರಕ್ಷಾ ಕಡತ
6) ಹೆಚ್ಚುವರಿ ಪ್ರತಿಗಳು.